ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜುಲೈ 19, 2020**

# ಪತ್ರಿಕಾ ಪ್ರಕಟಣೆ

## ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಮೃತಪಟ್ಟವರನ್ನು ಗೌರವದಿಂದ ಅಂತ್ಯ ಸಂಸ್ಕಾರ ಮಾಡಿ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ):

ಮಾರಕ ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಬೆಂಗಳೂರು ನಗರ ಪ್ರದೇಶದಲ್ಲಿ ಇತ್ತೀಚಿಗೆ ಸಂಭವಿಸುವ ಮರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಮೃತಪಟ್ಟ ಮುಸ್ಲಿಂ ಸಮುದಾಯದ ಶವಗಳನ್ನು ಸಭ್ಯವಾಗಿ ಸರ್ಕಾರದ ಮಾರ್ಗಸೂಚಿಗಳನ್ವಯ ಅಂತ್ಯಸಂಸ್ಕಾರ ಮಾಡಬೇಕೆಂದು ಬೆಂಗಳೂರು ನಗರ ಉತ್ತರ ಜಿಲ್ಲೆ ಜಿಲ್ಲಾ ವಕ್ಫ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಹಿನ್ನಲೆಯಲ್ಲಿ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ವಕ್ಫ್ ನೋಂದಾಯಿತ ಅಥವಾ ನೋಂದಾಯಿಸಲಾಗದೆ ಇರುವ ಖಬರಸ್ತಾನಗಳ ಆಡಳಿತ ಸಮಿತಿಗಳು/ಮುತವಲ್ಲಿಗಳು/ಆಡಳಿತಾಧಿಕಾರಿಗಳು ಕೋವಿಡ್ ಸಾಂಕ್ರಾಮಿಕ ರೋಗದಿಂದ ಮೃತಪಟ್ಟ ಮುಸ್ಲಿಮರ ಶವಸಂಸ್ಕಾರ ಮಾಡುವುದನ್ನು ತಡೆಯಬಾರದು, ಸದರಿ ಕಾರ್ಯಕ್ಕಾಗಿ ನೇಮಿಸಲಾದಂತಹ ನೋಡಲ್ ಅಧಿಕಾರಿಗಳ ಸಹಯೋಗದೊಂದಿಗೆ ಮೃತ ವ್ಯಕ್ತಿಯ ಸಭ್ಯ ಶವ ಸಂಸ್ಕಾರಕ್ಕೆ ಕ್ರಮ ಕೈಗೊಳ್ಳಬೇಕು. ಖಬರಸ್ತಾನಗಳ ಆಡಳಿತ ಸಮಿತಿಗಳ ಪ್ರತಿನಿಧಿಗಳಿಂದ ಅಸಹಕಾರ ಅಥವಾ ತಿರಸ್ಕರಣೆಯನ್ನು ಮೃತ ವ್ಯಕ್ತಿಗೆ ಮಾಡಲಾದ ಅವಮಾನ ಎಂದು ಭಾವಿಸಲಾಗುವುದು.

ಸದರಿ ಆದೇಶದ ಉಲ್ಲಂಘನೆಯು ಭಾರತೀಯ ದಂಡ ಸಂಹಿತೆಯ ನಿಬಂಧನೆಗಳಡಿ ದಂಡನಾತ್ಮಕವಾಗಿರುತ್ತದೆ ಹಾಗೂ ವಕ್ಫ್ ಕಾಯ್ದೆ 1995 ರ ಪ್ರವಾಧಾನಗಳಡಿ ಆಡಳಿತ ಸಮಿತಿಯಿಂದ ಹೊರ ಹಾಕುವ ಷರತ್ತಿಗೊಳ್ಳಪಟ್ಟಿರುತ್ತದೆ.

ಆಯಾ ಖಬರಸ್ತಾನಗಳ ಆಡಳಿತ ಸಮಿತಿಗಳಿಗೆ ಸದರಿ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಕ್ತ ಕ್ರಮ ಕೈಗೊಳ್ಳುವುದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಕೇವಲ ಅನುಪಾಲನೆಯನ್ನು ಹೊರತು ಪಡಿಸಿ ಯಾವುದೇ ರೀತಿಯ ಚರ್ಚೆಗೆ ಆಸ್ಪದ ನೀಡಕೂಡದು, ಈ ಆದೇಶವನ್ನು ಉಲ್ಲಂಘಿಸಿದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರೈಸ್ ವಸತಿ ಕಾಲೇಜುಗಳ ಫಲಿತಾಂಶ ಶೇ. 10 ರಷ್ಟು ಹೆಚ್ಚಳ : ಪಿಯುಸಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲು ಸೂಚನೆ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ): ಮುರಾರ್ಜಿ ದೇಸಾಯಿ ವಸತಿ ಕಾಲೇಜುಗಳ ಪಿಯುಸಿ ಫಲಿತಾಂಶವು ಕಳೆದ ವರ್ಷಕ್ಕಿಂತ ಶೇ. 10 ರಷ್ಟು ಹೆಚ್ಚಳವಾಗಿದ್ದು, ವಸತಿ ಕಾಲೇಜುಗಳ ಪ್ರವೇಶಕ್ಕೆ ಕೇಂದ್ರೀಕೃತ ಆನ್ ಲೈನ್ ಅರ್ಜಿ ಆಹ್ವಾನಿಸಲು ಎಂದು ಉಪಮುಖ್ಯಮಂತ್ರಿಗಳಾದ ಶ್ರೀ ಗೋವಿಂದ ಎಂ ಕಾರಜೋಳ ಅವರು ಸೂಚಿಸಿದ್ದಾರೆ.

ಕೊರೊನಾ ಸೋಂಕಿನ ನಡೆಯುವೆಯೂ ರಾಜ್ಯದಲ್ಲಿ ದ್ವಿತೀಯ ಪಿಯುಸಿ ಫಲಿತಾಂಶವು ಅತ್ಯುತ್ತಮವಾಗಿ ಬಂದಿದ್ದು, ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ 66 ಮುರಾರ್ಜಿ ದೇಸಾಯಿ ವಸತಿ ಕಾಲೇಜುಗಳ ವಿದ್ಯಾರ್ಥಿಗಳು ಶೇ. 86.4 ರಷ್ಟು ವಿದ್ಯಾರ್ಥಿಗಳು ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ಅವರಲ್ಲಿ ಶೇ. 75.3 ರಷ್ಟು ವಿದ್ಯಾರ್ಥಿಗಳು ಡಿಸ್ಟಿಂಗ್ಷನ್ ಮತ್ತು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. 422 ವಿದ್ಯಾರ್ಥಿಗಳು ಡಿಸ್ಟಿಂಗ್ಷನ್‌ನಲ್ಲಿ ಉತ್ತೀರ್ಣರಾಗಿದ್ದಾರೆ. 1809 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಗಣಿತ ಮತ್ತಿತರ ಪ್ರಮುಖ ವಿಷಯಗಳಲ್ಲಿ 72 ವಿದ್ಯಾರ್ಥಿಗಳು 100ಕ್ಕೆ 100 ಅಂಕ ಗಳಿಸಿದ್ದಾರೆ. 11 ಕಾಲೇಜುಗಳಲ್ಲಿ ಶೇ. 100 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಕಳೆದ ವರ್ಷ ಶೇ.76.4 ರಷ್ಟು ಫಲಿತಾಂಶ ಬಂದಿತ್ತು. ವಸತಿ ಕಾಲೇಜುಗಳ ಫಲಿತಾಂಶವು ರಾಜ್ಯದ ಒಟ್ಟಾರೆ ಪಿಯುಸಿ ಫಲಿತಾಂಶಕ್ಕಿಂತ ಶೇ. 25. ರಷ್ಟು ಹೆಚ್ಚಳವಾಗಿದೆ. ಪ್ರಥಮ ಪಿಯುಸಿ ಆರಂಭದಿಂದಲೇ ಸಿಇಟಿ/ ನೀಟ್/ಜೆಇಇ ಮತ್ತಿತರ ಪರೀಕ್ಷೆಗಳಿಗೆ ಡಿಜಿಟಲ್ ಆಧಾರಿತ ತರಬೇತಿ ನೀಡಲು ಸಿದ್ದತೆ ಮಾಡಿಕೊಳ್ಳಲಾಗಿದೆ. ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾದ ವಸತಿ ಶಾಲೆಗಳ ವಿದ್ಯಾರ್ಥಿಗಳು ವಸತಿ ಕಾಲೇಜುಗಳಲ್ಲಿ ತಮ್ಮ ವ್ಯಾಸಂಗ ಮುಂದುವರೆಸಿ, ಕೀರ್ತಿ ತರಬೇಕು ಎಂದು ಡಿಸಿಎಂ ತಿಳಿಸಿದ್ದಾರೆ.